ಅ) ಮೈಸೂರು ನಗರದ ಚಾಮುಂಡಿ ಬೆಟ್ಟದಲ್ಲಿ ಚಾಮುಂಡಿ ಸಫಾರಿ ಯೋಜನೆ ಕೆಲಸ ಎಂದು ಪ್ರಾರಂಭವಾಗುವುದು.

ಆ) ಇದರ ಅಂದಾಜು ವೆಚ್ಚ ಎಷ್ಟು: ಇದಕ್ಕೆ ಸಂಪನ್ಮೂಲ ಯಾವ ಯೋಜನೆಯಡಿಯಲ್ಲಿ ದೊರೆಯುತ್ತದೆ.

ಇ) ಈ ಕೆಲಸವನ್ನು ಸರ್ಕಾರವೇ ನಿರ್ವಹಿಸುವುದೇ ಅಥವಾ ಖಾಸಗಿ ಅವರಿಗೆ ಕೊಡುವ ಯೋಜನೆ ಇದೆಯೇ.

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಅರಣ್ಯ ಸಚಿವರು) :

ಅ) ಈ ಯೋಜನೆಯು ಇನ್ನೂ ಪರಿಶೀಲನೆ ಹಂತದಲ್ಲಿದೆ.

ಆ) ಈ ಯೋಜನೆಯ ಅಂದಾಜು ವೆಚ್ಚ ರೂ. 4.00 ಕೋಟಿ ಆಗಬಹುದೆಂದು ಅಂದಾಜು ಮಾಡಲಾಗಿದೆ. ಇದನ್ನು ಕಾರ್ಯಗತಗೊಳಿಸಲು ಯಾವ ಯೋಜನೆಯಡಿಯಲ್ಲಿ ಸಂಪನ್ಮೂಲ ಒದಗಿಸಬೇಕೆಂಬ ವಿಷಯ ಪರಿಶೀಲನೆಯಲ್ಲಿರುತ್ತದೆ.

ಇ) ಸದರಿ ಯೋಜನೆಯನ್ನು ಮೈಸೂರು ಮೃಗಾಲಯ ಪ್ರಾಧಿಕಾರದ ವತಿಯಿಂದ ಕೈಗೊಳ್ಳಬಹುದೆಂಬ ಪ್ರಸ್ತಾವನೆ ಇದೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ರೋಗಿಗಳಿಗೆ ಶುಲ್ಕ

1677 - ಶ್ರೀ ರಾಮಲಿಂಗರೆಡ್ಡಿ (ಜಯನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ರೋಗಿಗಳಿಗೆ ಹೊರರೋಗಿಗಳೂ ಸೇರಿದಂತೆ ಶುಲ್ಕ ವಿಧಿಸುವ ಬಗ್ಗೆ ಸರ್ಕಾರದವರು ಆಲೋಚಿಸುತ್ತಿರುವರೇ?

ಆ) ಹಾಗಿದ್ದಲ್ಲಿ ಎಷ್ಟು ಶುಲ್ಕ ವಿಧಿಸಲಾಗುವುದು?

ಇ) ಇದರಿಂದ ಬರಲಿರುವ ಅಂದಾಜು ವೆಚ್ಚವೆಷ್ಟು?

ಈ) ಈ ಹಣವನ್ನು ಆಯಾ ಆಸ್ಪತ್ರೆಗಳ ಅಭಿವೃದ್ಧಿಗಾಗಿ ಉಪಯೋಗಿಸಲಾಗುವುದೇ?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು

ಆ) ನಿರ್ಣಯ ತೆಗೆದುಕೊಂಡಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ತೀರ್ಮಾನಿಸಿರುವುದಿಲ್ಲ.

ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಯೋಗ ಪದವಿ ಕೋರ್ಸ್ ಪ್ರಾರಂಭ.

1846 - ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಯೋಗದ ಬಗ್ಗೆ ಪದವಿ" ಡಿಪ್ಲೋಮಾ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ.

ಆ) ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಯೋಗದ ಬಗ್ಗೆ ಮೂರು ವರ್ಷದ ಪದವಿ ಕೋರ್ಸು ಪ್ರಾರಂಭಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?

ಶ್ರೀ ಬಿ. ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು) :